# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು
## ದೂರವಾಣಿ ಸಂಖ್ಯೆ: 0821-2330453

**ನೇಮಕಾತಿ ಅಧಿಸೂಚನೆ ಸಂಖ್ಯೆ:ಆಡಳಿತ/ನೇಮಕಾತಿ/ಸೇ/ 758/2019**
**ದಿನಾಂಕ: 08.01.2019**

**ವಿಷಯ:-** ಮೈಸೂರು ಜಿಲ್ಲಾ ನ್ಯಾಯಾಂಗ ಘಟಕಕ್ಕೆ ಮಂಜೂರಾದ ಆದರೆ ಇನ್ನೂ ಕಾರ್ಯಾರಂಭ ಮಾಡಿರದ ನ್ಯಾಯಾಲಯಗಳಲ್ಲಿ ಖಾಲಿ ಇರುವ 46 ಸೇವಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

❋❋❋❋

ಮೈಸೂರು ಜಿಲ್ಲಾ ನ್ಯಾಯಾಂಗ ಘಟಕಕ್ಕೆ ಹೊಸದಾಗಿ ಹಲವು ನ್ಯಾಯಾಲಯಗಳು ಮಂಜೂರಾಗಿದ್ದು ಪ್ರಸ್ತುತ ಇನ್ನೂ ಕಾರ್ಯಾರಂಭ ಮಾಡಿರುವುದಿಲ್ಲ. ಸದರಿ ನ್ಯಾಯಾಲಯಗಳಲ್ಲಿ ಖಾಲಿ ಇರುವ **46** ಸೇವಕರ ಹುದ್ದೆಗಳಿಗೆ ಮೇಲ್ಕಂಡ ಅಧಿಸೂಚನೆಯನ್ವಯ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ವಿಶೇಷ ಸೂಚನೆ:**

**ಹೊಸದಾಗಿ ಮಂಜೂರಾದ ನ್ಯಾಯಾಲಯಗಳು ಕಾರ್ಯಾರಂಭ ಮಾಡಿದ ನಂತರ, ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗುವುದು.**

ಅರ್ಜಿಗಳನ್ನು ಮೈಸೂರು ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/mysuru-onlinerecruitment ಅಥವಾ http://karnatakajudiciary.kar.nic.in/districtrecruitment.asp ರಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕ **18.02.2019** ರಿಂದ ದಿನಾಂಕ: **20.03.2019** ರ ರಾತ್ರಿ

**11.59 ರವರೆಗೆ ಮಾತ್ರ ಸಲ್ಲಿಸತಕ್ಕದ್ದು ಮತ್ತು ಭಾರತೀಯ ಸ್ಟೇಟ್ ಬ್ಯಾಂಕ್ ಚಲನ್ ಮುಖಾಂತರ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕಃ 23.03.2019 ಆಗಿರುತ್ತದೆ.**

## ಹುದ್ದೆಯ ಹೆಸರುಃ ಸೇವಕರು

**ಖಾಲಿ ಹುದ್ದೆಗಳು** – 46

**ವೇತನ ಶ್ರೇಣಿ** : **17000-400-18600-450-20400-500-22400-550-24600-600-27000-650-28950**

**ಹುದ್ದೆಗಳ ವರ್ಗೀಕರಣಃ 46 ಹುದ್ದೆಗಳು**

| ಮೀಸಲಾತಿ | ಇತರೆ | ಮಹಿಳೆ | ಕಂಮಾಂಅಂ | ಗ್ರಾಮೀಣ | ಮಾಂಸೈ | ಅಂಗವಿಕಲ | ಯೋಂನಿಂಅಂ | ಒಟ್ಟು |
|---|---|---|---|---|---|---|---|---|
| ಪಂಜಾತಿ | 2 | 2 | | 2 | | 1** | | 7 |
| ಪಂಪಂಗಡ | | | | 1 | | | 1 | 2 |
| ಪ್ರವರ್ಗ-1 | 1 | 1 | | | | | | 2 |
| 2 ಎ | 1 | 2 | 1 | 1 | | | 1 | 6 |
| 2 ಬಿ | | | | 1 | | | | 1 |
| 3 ಎ | 1 | | | 1 | | | | 2 |
| 3 ಬಿ | 1 | 1 | | 1 | | | | 3 |
| ಸಾಮಾನ್ಯ | 4 | 7 | 1 | 6 | 2 | 1*+1** | 1 | 23 |
| ಒಟ್ಟು | 10 | 13 | 2 | 13 | 2 | 3 | 3 | 46 |

*ದೃಷ್ಟಿಮಾಂದ್ಯ / ದೃಷ್ಟಿದೋಷವುಳ್ಳ ಅಭ್ಯರ್ಥಿ (Blind & Low Vision)

**ಶ್ರವಣದೋಷವುಳ್ಳ ಅಭ್ಯರ್ಥಿ (Hearing impaired)

**(ಪರಿಶಿಷ್ಟ ಜಾತಿ ಹಾಗೂ ಸಾಮಾನ್ಯ ವರ್ಗದ ತಲಾ ಒಂದೊಂದು ಹುದ್ದೆಗಳು ಶ್ರವಣದೋಷವುಳ್ಳ ಅಭ್ಯರ್ಥಿಗಳಿಗೆ ಮತ್ತು ಸಾಮಾನ್ಯ ವರ್ಗದ ಒಂದು ಹುದ್ದೆ ದೃಷ್ಟಿಮಾಂದ್ಯ / ದೃಷ್ಟಿದೋಷವುಳ್ಳ ಅಭ್ಯರ್ಥಿಗೆ ಮೀಸಲಾಗಿರುತ್ತದೆ.)**

**ವಿದ್ಯಾರ್ಹತೆ:** 7ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

## ಆಯ್ಕೆಯ ವಿಧಾನ:

1. ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007ರ ಅನ್ವಯ ನೇರ ನೇಮಕಾತಿಯ ಮೂಲಕ ನಡೆಸಲಾಗುವುದು.

2. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ 01 ಹುದ್ದೆಗೆ 10 ಅಭ್ಯರ್ಥಿಗಳಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

3. ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.

4. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಕನ್ನಡ ಮಾಧ್ಯಮ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು ಹಾಗೂ ಗ್ರಾಮೀಣ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪ್ರವರ್ಗಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪ್ರವರ್ಗಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಆಯಾ ಪ್ರವರ್ಗಗಳ ಅರ್ಹ ಅಭ್ಯರ್ಥಿಗಳ ಲಭ್ಯತೆಯ ಕೊರತೆಯಿಂದಾಗಿ ಭರ್ತಿ ಮಾಡಲಾಗದ ರಿಕ್ತ ಸ್ಥಾನಗಳನ್ನು ಬ್ಯಾಕ್‌ಲಾಗ್ ಎಂದು ಪರಿಗಣಿಸಿ ಮುಂದಕ್ಕೆ ಕೊಂಡೊಯ್ಯಲಾಗುವುದು.

೬. ಅಧಿಸೂಚಿಸಲಾಗಿರುವ 46 ಹುದ್ದೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಸಾಮಾನ್ಯ ವರ್ಗದ ದೃಷ್ಟಿಮಾಂದ್ಯ, ದೃಷ್ಟಿದೋಷವುಳ್ಳ **(Blind/Low Vision)** ಮತ್ತು ಶ್ರವಣದೋಷವುಳ್ಳ (Hearing impaired) ಅಂಗವಿಕಲತೆ ಹೊಂದಿರುವ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದೇ ಇದ್ದಲ್ಲಿ ಸದರಿ ಸ್ಥಾನವನ್ನು ಮುಂದಿನ ನೇಮಕಾತಿಗೆ ಕೊಂಡೊಯ್ಯಲಾಗುವುದು.

**ವಿಶೇಷ ಟಿಪ್ಪಣಿ:** ಆಯ್ಕೆಯಾದ ಅಭ್ಯರ್ಥಿಗಳು **(NPS)** ನೂತನ ಪಿಂಚಣಿ ಯೋಜನೆಗೆ ಒಳಪಡುತ್ತಾರೆ

## ವಯೋಮಿತಿ:

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

ಅ. ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

ಆ. ಗರಿಷ್ಠ ವಯೋಮಿತಿ

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ, 3ಎ, 3ಬಿ | 38 ವರ್ಷ |
| ಪ.ಜಾತಿ, ಪ.ಪಂಗಡ, ಪ್ರವರ್ಗ – 1 | 40 ವರ್ಷ |

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು.

## ವಯೋಮಿತಿ ಸಡಿಲಿಕೆ:

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

1. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

2. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

3. ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.

4. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೊ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೊ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

5. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

6. ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ

ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

7. ಮಾಜಿ ಸೈನಿಕರು, ವಿಧವೆಯರು, ಅಂಗವಿಕಲರು ಮತ್ತು ಜೀತಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದೊಳಗಾಗಿ ಪಡೆದಿಟ್ಟುಕೊಂಡಿರತಕ್ಕದ್ದು.

ವಿಶೇಷ ಸೂಚನೆ:

- ಎಲ್ಲಾ ಪ್ರಮಾಣ ಪತ್ರಗಳು ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು
- ಅಭ್ಯರ್ಥಿಯು ವ್ಯಾಸಂಗ ಮಾಡಿದ ಶಾಲೆಯ, ಮುಖ್ಯೋಪಾಧ್ಯಾಯರಿಂದ ಸಹಿ ಪಡೆದ 7ನೇ ತರಗತಿಯ ಅಂಕಪಟ್ಟಿಯನ್ನು ಕೊನೆಯ ದಿನಾಂಕದೊಳಗೆ ಪಡೆದಿರಬೇಕು.
- 7ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೆ (Grade) ಅಂಕಗಳಾಗಿ ಪರಿವರ್ತಿಸಿ, ಗರಿಷ್ಠ ಅಂಕಗಳು, ಪಡೆದ ಅಂಕಗಳು ಮತ್ತು ಫಲಿತಾಂಶವನ್ನು ನಮೂದಿಸಿದ ಅಂಕಪಟ್ಟಿಯನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು.
- ಅಂಕಪಟ್ಟಿಯು ತ್ರೈಮಾಸಿಕ/ಸೆಮಿಸ್ಟರ್ ಅಂಕಗಳಲ್ಲಿದ್ದರೆ, ಎಲ್ಲಾ ತ್ರೈಮಾಸಿಕ/ ಸೆಮಿಸ್ಟರ್ ಅಂಕಗಳನ್ನು ಕ್ರೋಡೀಕರಿಸಿ ಅಂಕಪಟ್ಟಿಯನ್ನು ಪಡೆದಿರಬೇಕು.

ಈ ಮೇಲಿನ ಸೂಚನೆಗಳಿಗೆ ಅನುಸಾರವಾಗಿ ದಾಖಲಾತಿಗಳನ್ನು ಒದಗಿಸಲು ತಪ್ಪಿದಲ್ಲಿ, ಅಂಥಹ ಅಭ್ಯರ್ಥಿಯನ್ನು ಪರಿಗಣಿಸಲಾಗುವುದಿಲ್ಲ.

ಈ ಅಧಿಸೂಚನೆಯು ಚಾಲ್ತಿಯಲ್ಲಿರುವ ಮತ್ತು ಕಾಲ-ಕಾಲಕ್ಕೆ ಗೌರವಾನ್ವಿತ ಉಚ್ಚ ನ್ಯಾಯಾಲಯ/ಸರ್ಕಾರದಿಂದ ಹೊರಡಿಸಲ್ಪಡುವ ಆದೇಶಗಳಿಗೆ ಒಳಪಟ್ಟಿರುತ್ತದೆ.

ಯಾವುದೇ ಅಭ್ಯರ್ಥಿಯು ಸಂದರ್ಶನದ ಬಗ್ಗೆ ಮಾಹಿತಿ ಬರದಿದ್ದರೆ, ಅವರು ಸಂದರ್ಶನಕ್ಕೆ ಅರ್ಹರಲ್ಲ ಎಂದು ತಿಳಿಯುವುದು ಮತ್ತು ಈ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ.

## ಪರಿವೀಕ್ಷಣಾ ಅವಧಿ:

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 02 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ.

## ನಿಗದಿತ ಅರ್ಜಿ ಶುಲ್ಕ ಹಾಗೂ ಪಾವತಿಸಬೇಕಾದ ವಿಧಾನ:

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿ | ಯಾವುದೇ ಶುಲ್ಕವಿಲ್ಲ |
| ಪ್ರವರ್ಗ-2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ | ರೂ. 100/- |
| ಸಾಮಾನ್ಯ ವರ್ಗ | ರೂ. 200/- |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/mysuru-onlinerecruitment ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ State Bank Collect ಮೂಲಕ online payment through net banking/credit card/debit card/Challan download ಸೌಲಭ್ಯದ ಮೂಲಕ ಪಾವತಿ ಮಾಡಬಹುದಾಗಿದೆ.

ಈ ರೀತಿ net banking/credit card/debit card/Challan download ಸೌಲಭ್ಯದ ಮೂಲಕ ಶುಲ್ಕ ಪಾವತಿ ಮಾಡಲು ಇಚ್ಚಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ printout ಅನ್ನು

ಪಡೆದುಕೊಂಡು ಎಸ್.ಬಿ.ಐ. ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು.

ಇದನ್ನು ಹೊರತುಪಡಿಸಿ ಯಾವುದೇ ನಗದು, ಡಿಮ್ಯಾಂಡ್ ಡ್ರಾಫ್ಟ್ : ಪೋಸ್ಟಲ್ ಆರ್ಡರ್: ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಒಮ್ಮೆ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ.

## ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು:

1. 7ನೇ ತರಗತಿ/ತತ್ಸಮಾನ ಪರೀಕ್ಷೆಯ ಗರಿಷ್ಠ ಹಾಗೂ ಗಳಿಸಿದ ಅಂಕಗಳನ್ನು ಸರಿಯಾಗಿ ನಮೂದಿಸತಕ್ಕದ್ದು. ಅಂಕಗಳ ಬದಲಿಗೆ ಪಾಯಿಂಟ್‌ಗಳಿದ್ದಲ್ಲಿ, ಗರಿಷ್ಠ ಹಾಗೂ ಗಳಿಸಿದ ಪಾಯಿಂಟ್‌ಗಳು ಮತ್ತು ಶೇಕಡಾವಾರು ಅಂಕಗಳನ್ನು, ಸಂಖ್ಯೆಗಳಲ್ಲಿ ಸಮರ್ಪಕವಾಗಿ ನಮೂದಿಸತಕ್ಕದ್ದು ಅಂಕಗಳನ್ನು ತಪ್ಪಾಗಿ ನಮೂದಿಸಿದಲ್ಲಿ ಅಭ್ಯರ್ಥಿಗಳೇ ಹೊಣೆಗಾರರು.

2. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು, ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

4. ಅರ್ಹ ಅಭ್ಯರ್ಥಿಗಳಿಗೆ SMS/E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ/ ಅರ್ಹತಾ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ

ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ/ಅರ್ಹತಾ ಪರೀಕ್ಷೆಗೆ ಕರೆಯಲಾಗುವುದು. ಸಂದರ್ಶನ / ಅರ್ಹತಾ ಪರೀಕ್ಷೆಯ ಪ್ರವೇಶ ಪತ್ರಗಳನ್ನು ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ತಮ್ಮೊಂದಿಗೆ ತರಬೇಕು.

5. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ. ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5 cm ಉದ್ದ x 3.6 cm ಅಗಲವುಳ್ಳದ್ದಾಗಿರಬೇಕು ಮತ್ತು 50 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

ಆ. ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

ಇ. ಅಭ್ಯರ್ಥಿಯ ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 c.m ಉದ್ದ x 7.5 c.m. ಅಗಲವುಳ್ಳದ್ದಾಗಿರಬೇಕು ಮತ್ತು 25 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು.) ಅಪ್‌ಲೋಡ್ ಮಾಡಬೇಕು.

6. ತದನಂತರ ಅಭ್ಯರ್ಥಿಯು ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು download ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ / ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

7. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು/ಸಲ್ಲಿಸಲು ದಿನಾಂಕಃ **20.03.2019** ರ ರಾತ್ರಿ 11.59 ರವರೆಗೆ ಅವಕಾಶವಿರುತ್ತದೆ.

೮. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

೯. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಇತರೆ ಸೂಚನೆಗಳು :-

೧. ಮಾಜಿ ಸೈನಿಕ ವರ್ಗದ ಅಡಿಯಲ್ಲಿ ಮೀಸಲಾತಿ/ವಯೋಮಿತಿ ರಿಯಾಯಿತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆ ಹೊಂದಿದ ಅಥವಾ ವಿಮುಕ್ತಿ ಹೊಂದಿದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

೨. ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನೀಡಲಾದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸುವ ಕಡೆಯ ದಿನಾಂಕದೊಳಗೆ ಕಡ್ಡಾಯವಾಗಿ ಪಡೆದು ಇಟ್ಟುಕೊಂಡಿರತಕ್ಕದ್ದು.

೩. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ ಪ್ರವರ್ಗ-1 ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು ಪ್ರವರ್ಗ 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್' ರಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಅರ್ಜಿ ಸ್ವೀಕರಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು.

೪. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ದಿ:10.08.2005 ರ ಸರ್ಕಾರಿ ಅದೇಶ ಸಂಖ್ಯೆ:ಸಿಆಸುಇ/96/ಸೇನನಿ/2005 ಅನ್ವಯ ನಿಗದಿತ ನಮೂನೆ-2 ರಲ್ಲಿ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಇಟ್ಟುಕೊಳ್ಳತಕ್ಕದ್ದು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

೫. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2 ರ ಜೊತೆ ನಮೂನೆ-1 ರಲ್ಲೂ ದೃಢೀಕರಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು.

೬. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿಃ 19.11.2005 ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆಃ ಸಿಆಸುಇ/115/ಸೇನನಿ/2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

೭. ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಿಸಿದ ಶಾಲಾ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರವನ್ನು ಪಡೆದಿರಬೇಕು.

೮. ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅಭ್ಯರ್ಥಿಗಳು ದಿನಾಂಕ **27.07.2001** ರ ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ/**44**/ಸೇನನಿ/**2001** ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಸಂಬಂಧಿಸಿದ ತಹಸೀಲ್ದಾರರಿಂದ ಪ್ರಮಾಣ ಪತ್ರ ಪಡೆದಿರಬೇಕು.

೯. ವಿಧವೆಯರು, ಜೀತ ಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರ ಪಡೆದಿರಬೇಕು.

೧೦. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗಬೇಕು.

೧೧. ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.

12. ಸಂದರ್ಶನದ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ, (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ/ವರ್ಗಾವಣೆ ಪ್ರಮಾಣ ಪತ್ರ), ಜಾತಿ ಪ್ರಮಾಣ ಪತ್ರ, ಗ್ರಾಮೀಣ ಅಭ್ಯರ್ಥಿ/ ಅಂಗವಿಕಲ ಅಭ್ಯರ್ಥಿ/ ಕನ್ನಡ ಮಾಧ್ಯಮ ಅಭ್ಯರ್ಥಿ/ ಮಾಜಿ ಸೈನಿಕ/ ಯೋಜನಾ ನಿರಾಶ್ರಿತ ಅಭ್ಯರ್ಥಿ ಮೀಸಲಾತಿಗೆ ಸಂಬಂಧಿಸಿದಂತೆ ಕ್ಲೇಮು ಮಾಡಿದ ಅಭ್ಯರ್ಥಿಗಳು ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಹಾಗೂ ವಯೋಮಿತಿ ರಿಯಾಯಿತಿ ಕೋರುವ ಅಭ್ಯರ್ಥಿಗಳು ನಿಗದಿತ ಪ್ರಮಾಣ ಪತ್ರಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿರುವ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು.

13. ಎಲ್ಲಾ ಮೀಸಲಾತಿಗಳಿಗೂ ಪ್ರತ್ಯೇಕವಾಗಿ ಅರ್ಜಿಗಳನ್ನು ಸಲ್ಲಿಸುವ ಅಗತ್ಯವಿಲ್ಲ. ಎಲ್ಲಾ ಮೀಸಲಾತಿಗಳನ್ನು ಒಳಪಟ್ಟಂತೆ ಒಂದೇ ಅರ್ಜಿಯನ್ನು ಸಲ್ಲಿಸತಕ್ಕದ್ದು.

14. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ನಂತರ ಪಡೆದ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

15. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡು ಬಂದಲ್ಲಿ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹಾ ಗುರಿಯಾಗಬೇಕಾಗಿರುತ್ತದೆ. ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳ ಮೇಲೆ ಯಾವುದೇ ಸಮಯದಲ್ಲಾದರೂ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

16. ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಯಿಂದ ಅನರ್ಹಗೊಳಿಸಲಾಗುವುದು.

17. ಯಾವುದೇ ಅಭ್ಯರ್ಥಿಯು ಸರ್ಕಾರಿ/ಸರ್ಕಾರೇತರ ಅಧಿಕಾರಿಗಳಿಂದ ತನ್ನ ಅಭ್ಯರ್ಥಿತ್ವದ ಬಗ್ಗೆ ಪ್ರಭಾವ ಬೀರಿದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

(ಎಸ್.ಕೆ.ವಂಟಿಗೋಡಿ)<br>
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,<br>
ಮೈಸೂರು.

ಅಧಿಸೂಚನೆಯ ನಕಲನ್ನು ಈ ಕೆಳಕಂಡವರ ಅವಗಾಹನೆಗಾಗಿ ಸಲ್ಲಿಸಲಾಗಿದೆ:

ಮಹಾವಿಲೇಖನಾಧಿಕಾರಿಗಳು,<br>
ಗೌರವಾನ್ವಿತ ಕರ್ನಾಟಕ ಉಚ್ಛ ನ್ಯಾಯಾಲಯ,<br>
ಬೆಂಗಳೂರು – 560 001.

ಅಧಿಸೂಚನೆಯ ನಕಲನ್ನು ಈ ಕೆಳಕಂಡವರಿಗೆ ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ ಈ ಮೇಲ್ ಮುಖಾಂತರ ರವಾನಿಸಲಾಗಿದೆ:

1. ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ಬಿಜಾಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ್, ಗುಲ್ಬರ್ಗ, ಹಾಸನ, ಹಾವೇರಿ, ಕೊಡಗು, ಕೋಲಾರ, ಕೊಪ್ಪಳ, ಮಂಗಳೂರು, ಮಂಡ್ಯ, ರಾಮನಗರ, ರಾಯಚೂರು, ತುಮಕೂರು, ಉಡುಪಿ, ಕಾರವಾರ, ಶಿವಮೊಗ್ಗ ಮತ್ತು ಯಾದಗಿರಿ

2. ವಿಲೇಖನಾಧಿಕಾರಿಗಳು, ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು,

3. ನ್ಯಾಯಾಧೀಶರು, ಕುಟುಂಬ ನ್ಯಾಯಾಲಯ, ಮೈಸೂರು.

4. ಅಧ್ಯಕ್ಷಾಧಿಕಾರಿಗಳು, ಕಾರ್ಮಿಕ ನ್ಯಾಯಾಲಯ, ಮೈಸೂರು.

5ಂ ಅಧ್ಯಕ್ಷಾಧಿಕಾರಿಗಳು, ಔದ್ಯಮಿಕ ನ್ಯಾಯಾಧಿಕರಣ, ಮೈಸೂರುಂ

6ಂ 8ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹುಣಸೂರುಂ

7ಂ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು, ಮೈಸೂರುಂ

8ಂ ನ್ಯಾಯಾಧೀಶರು, ಲಘುವ್ಯವಹಾರಗಳ ನ್ಯಾಯಾಲಯ, ಮೈಸೂರುಂ

9ಂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮೈಸೂರು

10ಂ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂದಂನ್ಯಾಂ ದಂಡಾಧಿಕಾರಿಗಳು, ನಂಜನಗೂಡುಂ

11ಂ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂದಂನ್ಯಾಂ ದಂಡಾಧಿಕಾರಿಗಳು, ತಿಂ ನರಸೀಪುರಃ

12ಂ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂದಂನ್ಯಾಂ ದಂಡಾಧಿಕಾರಿಗಳು, ಕೆಂಆರ್ಂನಗರಂ

13ಂ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂದಂನ್ಯಾಂ ದಂಡಾಧಿಕಾರಿಗಳು, ಹುಣಸೂರುಂ

14ಂ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂದಂನ್ಯಾಂ ದಂಡಾಧಿಕಾರಿಗಳು, ಪಿರಿಯಾಪಟ್ಟಣಂ

15ಂ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂದಂನ್ಯಾಂ ದಂಡಾಧಿಕಾರಿಗಳು, ಹೆಚ್ಂಡಿಂಕೋಟೆಂ

16ಂ 1ನೇ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂದಂನ್ಯಾಂ ದಂಡಾಧಿಕಾರಿಗಳು, ಮೈಸೂರುಂ

17ಂ 2ನೇ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂದಂನ್ಯಾಂ ದಂಡಾಧಿಕಾರಿಗಳು, ಮೈಸೂರುಂ

18ಂ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂದಂನ್ಯಾಂ ದಂಡಾಧಿಕಾರಿಗಳು, ನಂಜನಗೂಡುಂ

19ಂ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂದಂನ್ಯಾಂ ದಂಡಾಧಿಕಾರಿಗಳು, ತಿಂನರಸೀಪುರಂ

20ಂ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂದಂನ್ಯಾಂ ದಂಡಾಧಿಕಾರಿಗಳು, ಕೆಂಆರ್ಂನಗರಂ

21ಂ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂದಂನ್ಯಾಂ ದಂಡಾಧಿಕಾರಿಗಳು, ಹುಣಸೂರುಂ

22ಂ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂದಂನ್ಯಾಂ ದಂಡಾಧಿಕಾರಿಗಳು, ಪಿರಿಯಾಪಟ್ಟಣಂ

23ಂ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಂದಂನ್ಯಾಂ ದಂಡಾಧಿಕಾರಿಗಳು, ಹೆಚ್ಂಡಿಂ ಕೋಟೆಂ

೨೪. ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, 2ನೇ ನ್ಯಾಯಾಲಯ, ಮೈಸೂರು.

೨೫. ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, 3ನೇ ನ್ಯಾಯಾಲಯ, ಮೈಸೂರು.

೨೬. ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, 4ನೇ ನ್ಯಾಯಾಲಯ, ಮೈಸೂರು.

**ಇವರಿಗೆ,**

೧. ರಿಜಿಸ್ಟ್ರಾರ್ (ಕಂಪ್ಯೂಟರ್), ಗೌರವಾನ್ವಿತ ಉಚ್ಚ ನ್ಯಾಯಾಲಯ, ಬೆಂಗಳೂರು - ಇವರಿಗೆ ಆನ್‌ಲೈನ್ ಸಹಾಯ, ಎಸ್‌ಎಮ್‌ಎಸ್ ಗೇಟ್‌ವೇ ಹಾಗೂ ಇ-ಮೇಲ್ ಗೇಟ್‌ವೇ ಸೌಲಭ್ಯ ನೀಡುವಂತೆ ಕೋರಿ.

೨. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು – ಇವರಿಗೆ ಕರ್ನಾಟಕ ರಾಜ್ಯ ವಾರ್ತಾ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ. (ದ್ವಿಪ್ರತಿಯಲ್ಲಿ)

೩. ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ, ನಂ.17, ಭಗವಾನ್ ಮಹಾವೀರ (ಇನ್‌ಫೆಂಟ್ರಿ) ಜೈನ್ ರಸ್ತೆ, ಬೆಂಗಳೂರು – 560 001 – ಇವರಿಗೆ ಪ್ರಾದೇಶಿಕ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಪ್ರಕಟಿಸಲು ಕೋರಿ. (ದ್ವಿಪ್ರತಿಯಲ್ಲಿ)

೪. ಉಪನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಧನ್ವಂತರಿ ರಸ್ತೆ, ಮೈಸೂರು- ಇವರಿಗೆ ಪ್ರಾದೇಶಿಕ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಪ್ರಕಟಿಸಲು ಕೋರಿ. (ಸಂಕ್ಷಿಪ್ತ ಅಧಿಸೂಚನೆ-ದ್ವಿಪ್ರತಿಯಲ್ಲಿ)

೫. ಉದ್ಯೋಗಾಧಿಕಾರಿಗಳು, ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಮೈಸೂರು ಇವರಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ

೬. ರಾಜ್ಯ ಸರ್ಕಾರದ www.karnataka.gov.in ಜಾಲತಾಣಕ್ಕೆ ಪ್ರಕಟಣೆಗಾಗಿ.

೭. ಸಾಫ್ಟ್‌ವೇರ್ ಟೆಕ್ನಿಷಿಯನ್, ಕಂಪ್ಯೂಟರ್ ವಿಭಾಗ, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು – ಇವರಿಗೆ Webhost ಮಾಡುವ ಸಲುವಾಗಿ, ಗೌರವಾನ್ವಿತ ಉಚ್ಚ ನ್ಯಾಯಾಲಯದ ಕಂಪ್ಯೂಟರ್ ವಿಭಾಗದೊಂದಿಗೆ ಸಂಪರ್ಕದಲ್ಲಿದ್ದು ಆನ್‌ಲೈನ್ ಅಧಿಸೂಚನೆಯ ಸಂಪೂರ್ಣ ಕಾರ್ಯವನ್ನು ಪೂರ್ಣಗೊಳಿಸುವ ಸಲುವಾಗಿ ಹಾಗೂ ಕ್ರಮ ಸಂಖ್ಯೆ 1 ರಿಂದ 26 ರವರೆಗಿನ ನ್ಯಾಯಾಲಯಗಳಿಗೆ ಈ ಮೇಲ್ ಮುಖಾಂತರ ಕಳುಹಿಸುವ ಸಲುವಾಗಿ.